# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

ದಿನಾಂಕ: 03-03-2018

## ಪತ್ರಿಕಾ ಪ್ರಕಟಣೆಗಾಗಿ

ವಿಜಯಪುರ: ಮಹಿಳೆಯ ಜ್ಞಾನ, ಸೃಜನಶೀಲತೆ ಮತ್ತು ಅವಳ ಕೌಶಲ್ಯವನ್ನು ಇಡೀ ಸಮಾಜದ ಮುಂದೆ ಜಾಹೀರುಪಡಿಸುವ ಹಾಗೂ ಅದಕ್ಕೊಂದು ಸಾಮಾಜಿಕ ಮಾನ್ಯತೆಯನ್ನು ಕೊಡುವ ಉದ್ದೇಶದಿಂದ ಮಹಿಳಾ ಸಬಲೀಕರಣ ಮ್ಯಾರಥಾನ್ ಮಾಡಿದ್ದೇವೆ ಎಂದು ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ತಿಳಿಸಿದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಮಹಿಳಾ ಸಾಂಸ್ಕೃತಿಕ ಹಬ್ಬದ ಪ್ರಯುಕ್ತ ಶನಿವಾರ ಬೆಳಿಗ್ಗೆ ಹಮ್ಮಿಕೊಂಡಿದ್ದ ಮ್ಯಾರಥಾನ್‌ಗೆ ಚಾಲನೆ ನೀಡಿ ಮಾತನಾಡಿದರು.

ಮಹಿಳಾ ವಿವಿಯ ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಮಹಿಳಾ ಸಾಂಸ್ಕೃತಿಕ ಹಬ್ಬದ ರಾಯಭಾರಿಗಳಾಗಿ ಇಂದು ಈ ಓಟವನ್ನು ಕೈಗೊಂಡಿರುವುದು ಹರ್ಷ ತಂದಿದೆ ಎಂದು ಹೇಳಿದ ಅವರು, ಆಧುನಿಕ ಸಮೂಹ ಮಾಧ್ಯಮಗಳಿಂದ ಹಾಗೂ ಇತರೆ ಸಾಧನಗಳಿಂದ ಎಲ್ಲರಿಗೂ ಮಾಹಿತಿಯನ್ನು ತಲುಪಿಸುವಂತಹ ಕಾರ್ಯವನ್ನು ವಿದ್ಯಾರ್ಥಿಗಳು ಮಾಡುತ್ತಿರುವುದು ಹೆಮ್ಮೆಯ ಸಂಗತಿ. ಈ ಉತ್ಸಾಹ ಸದಾ ನಿಮ್ಮ ಜೀವನದಲ್ಲಿ ಇರಲಿ ಎಂದರು.

ಮಹಿಳಾ ವಿವಿ ಸಿಂಡಿಕೇಟ್‌ನ ನಿರ್ವಾಹಕ ನಿರ್ದೇಶಕ ವಿರೇಶ ಪಟ್ಟಣಶೆಟ್ಟಿ ಮ್ಯಾರಥಾನ್‌ನಲ್ಲಿ ಮಾತನಾಡಿ, ವಿದ್ಯಾರ್ಥಿಗಳ ಜೀವನ ಅತ್ಯಮೂಲ್ಯವಾದದ್ದು. ಕೆಟ್ಟ ಚಟಗಳಿಗೆ ದಾಸರಾಗಬೇಡಿ. ಆರೋಗ್ಯಕರ ಜೀವನವನ್ನು ರೂಪಿಸಿಕೊಂಡರೆ ಮಾತ್ರ ಆರೋಗ್ಯಕರ ವಿಚಾರಗಳು ಬೆಳೆಯಲು ಸಾಧ್ಯ. ಆದರೆ ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ಜಂಕ್ ಫುಡ್ಸ್‌ಗಳಿಗೆ ಮಾರು ಹೋಗುತ್ತಿದ್ದಾರೆ ಎಂದು ವಿಷಾದ ವ್ಯಕ್ತಪಡಿಸಿದರು.

ಮಹಿಳಾ ಸಾಂಸ್ಕೃತಿಕ ಹಬ್ಬದ ಪ್ರಧಾನ ಸಂಯೋಜಕಿ ಪ್ರೊ.ಆರ್. ಸುನಂದಮ್ಮ ಮಾತನಾಡಿ, ಇಂದು ಸಮಾಜದಲ್ಲಿ ಮಹಿಳೆ ಎಲ್ಲಾ ಕ್ಷೇತ್ರದಲ್ಲಿ ಮುಂದುವರೆಯುತ್ತಿದ್ದಾಳೆ. ಆದರೂ ಅವಳ ಹಿನ್ನಡೆಯನ್ನು ಗಮನಿಸುವವರು ಕಡಿಮೆ ಮಟ್ಟದಲ್ಲಿ ಇರುವುದು ವಿಷಾದನೀಯ. ಇಂತಹ ಸವಾಲನ್ನು ಎದುರಿಸಿಕೊಂಡು ಮುಂದೆ ಹೋಗಬೇಕಾದರೆ ಮಹಿಳೆ ಶ್ರಮ ಪಡಬೇಕಾಗುತ್ತದೆ. ಎಲ್ಲವನ್ನೂ ಮೀರಿ ಬೆಳೆಯಲು ಇಂತಹ ಕಾರ್ಯಕ್ರಮಗಳು ನಮ್ಮೊಳಗೆ ಒಂದು ಉತ್ಸಾಹ, ಪ್ರೇರಣೆ ನೀಡುತ್ತವೆ ಎಂದು ಹೇಳಿದರು.

ನಗರದ ಬಿ.ಎಲ್.ಡಿ.ಇ. ಇಂಜಿನಿಯರಿಂಗ್ ಕಾಲೇಜು, ಸೈನಿಕ ಶಾಲೆ, ಗೋಲಗುಮ್ಮಟ ಮತ್ತು ಕೋರ್ಟ್ ಸರ್ಕಲ್ ಹೀಗೆ ನಾಲ್ಕು ಕಡೆಗಳಿಂದ ಮ್ಯಾರಥಾನ್ ಹೊರಟು, ಗಾಂಧೀ ವೃತ್ತದ ಬಳಿ ಸಮಾರೋಪಗೊಂಡಿತು. ಈ ಮ್ಯಾರಥಾನ್‌ನಲ್ಲಿ ಮಹಿಳಾ ವಿವಿಯ ವಿವಿಧ ನಿಖಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ-ಬೋಧಕೇತರ ಸಿಬ್ಬಂದಿ, ಸಂಶೋಧನಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಫೋಟೋ ಕ್ಯಾಪ್ಷನ್

1. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಆಯೋಜಿಸಿದ್ದ ಮಹಿಳಾ ಸಾಂಸ್ಕೃತಿಕ ಹಬ್ಬದ ಪ್ರಯುಕ್ತ ಮಹಿಳಾ ಸಬಲೀಕರಣಕ್ಕಾಗಿ ಮ್ಯಾರಥಾನ್‌ನಲ್ಲಿ ಮಹಿಳಾ ವಿವಿ ಕುಲಪತಿ  ಪ್ರೊ.ಸಬಿಹಾ ಮಾತನಾಡಿದರು.

2. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಆಯೋಜಿಸಿದ್ದ ಮಹಿಳಾ ಸಾಂಸ್ಕೃತಿಕ ಹಬ್ಬದ ಪ್ರಯುಕ್ತ ಮಹಿಳಾ ಸಬಲೀಕರಣಕ್ಕಾಗಿ ಮ್ಯಾರಥಾನ್‌ನಲ್ಲಿ ಮಹಿಳಾ ವಿವಿ ಸಿಂಡಿಕೇಟ್‌ನ ನಿರ್ವಾಹಕ ನಿರ್ದೇಶಕ ವಿರೇಶ ಪಟ್ಟಣಶೆಟ್ಟಿ ಮಾತನಾಡಿದರು.

3. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಆಯೋಜಿಸಿದ್ದ ಮಹಿಳಾ ಸಾಂಸ್ಕೃತಿಕ ಹಬ್ಬದ ಪ್ರಯುಕ್ತ ಮಹಿಳಾ ಸಬಲೀಕರಣಕ್ಕಾಗಿ ಮ್ಯಾರಥಾನ್‌ನಲ್ಲಿ ವಿವಿಯ ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ–ಬೋಧಕೇತರ ಸಿಬ್ಬಂದಿ, ಸಂಶೋಧನಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.




SUBHASH
COLOUR LAB
NAND TRAVELS